ಹಾಗೂ ಪೌಷ್ಟಿಕ / ಔಷಧ ಮೂಲಿಕೆಗಳು) ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಗಳು ನಡೆಯಲಿವೆ.

ಇದರಿಂದ, ಈ ಭಾಗದಲ್ಲಿರುವ ಜೈವಿಕ ತಂತ್ರಜ್ಞಾನ ಉದ್ದಿಮೆಗಳಿಗೆ ಪ್ರೋತ್ಸಾಹ / ಉತ್ತೇಜನ ದೊರೆಯಲಿದ್ದು, ಸ್ಥಳೀಯ ಯುವಕ ಯುವತಿಯರಿಗೆ ಉದ್ಯೋಗಾವಕಾಶಗಳು ಲಭ್ಯವಾಗಲಿವೆ.

ಇ) ಬೀದರ್‌ನಲ್ಲಿ ವೈವೇರಿಯಂ – Animal House (ಪ್ರಾಣಿ ಗೃಹ) ಸ್ಥಾಪಿಸಲು ನಿರ್ಧರಿಸಲಾಗಿದೆ.

ಈ) ವೈವೇರಿಯಂ – Animal House (ಪ್ರಾಣಿ ಗೃಹ) ವನ್ನು ಬೀದರ್‌ನಲ್ಲಿರುವ ಕರ್ನಾಟಕ ಪಶು ಸಂಗೋಪನೆ ಹಾಗೂ ಮೀನುಗಾರಿಕೆ ವಿಶ್ವವಿದ್ಯಲಯದ ಆವರಣದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ.

ಉ) ಈ ಪಾರ್ಕ್‌ಗಳನ್ನು ಸ್ಥಾಪಿಸಲು ಒಟ್ಟು ವೆಚ್ಚ ಸುಮಾರು ರೂ. 150 ಕೋಟಿಗಳೆಂದು ಅಂದಾಜಿಸಲಾಗಿದ್ದು, ಇದನ್ನು ಸಾರ್ವಜನಿಕ/ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಸರ್ಕಾರವು ಶೇಕಡ 20 ರಷ್ಟು ಮೊತ್ತವನ್ನು ಭರಿಸಲು ಯೋಜಿಸಲಾಗಿದೆ. ಇಲ್ಲಿಯವರೆಗೆ ಇದಕ್ಕಾಗಿ ಯಾವುದೇ ಹಣ ವೆಚ್ಚ ಮಾಡಿರುವುದಿಲ್ಲ.

ಈ ಪಾರ್ಕುಗಳ ಸ್ಥಾಪನೆಗಾಗಿ 2010–11ನೇ ಸಾಲಿನಲ್ಲಿ ಸುಮಾರು 15 ಕೋಟಿ ರೂಪಾಯಿಗಳನ್ನು ಸರ್ಕಾರದಿಂದ ನೀಡಲು ಯೋಜಿಸಲಾಗಿದೆ.

ಊ) ಯಾವುದೇ ಪ್ರಸ್ತಾವನೆಯನ್ನು ಇದುವರೆವಿಗೆ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ.

ಶಿಕ್ಷಣ ಸಂಸ್ಥೆಗಳ ವಿವರ

747 (1087) ಶ್ರೀ ಕೆ.ಜೆ.ಜಾರ್ಜ್ (ಸರ್ವಜ್ಞನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞನಗರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ/ಅನುದಾನಿತ/ ಅನುದಾನ ರಹಿತವಾದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ/ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ/ ಸರ್ಕಾರಿ ಪ್ರೌಢಶಾಲೆಗಳಲ್ಲಿ ಎಷ್ಟು ಜನ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ (ಖಾಲಿಯಿರುವ ಹುದ್ದೆಗಳ ವಿವರ ನೀಡುವುದು);

ಆ) ಸರ್ವಜ್ಞ ನಗರ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರೌಢಶಾಲೆ/ ಸರ್ಕಾರಿ ಪದವಿಪೂರ್ವ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) 2010–11ನೇ ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲೆ/ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಬಗ್ಗೆ ಶಿಕ್ಷಣ ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ (ಮಾಹಿತಿ ನೀಡುವುದು)?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಸರ್ವಜ್ಞನಗರ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ ಅನುದಾನಿತ/ಅನುದಾನರಹಿತವಾದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ/ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ/ಸರ್ಕಾರಿ ಪ್ರೌಢಶಾಲೆಗಳ ವಿವರ.

	ಕಿರಿಯ ಪ್ರಾಥಮಿಕ	ಹಿರಿಯ ಪ್ರಾಥಮಿಕ	ಪ್ರೌಢಶಾಲೆ
ಸರ್ಕಾರಿ	08	14	—
ಅನುದಾನಿತ	03	10	43
ಅನುದಾನ ರಹಿತ	08	25	43
ಒಟ್ಟು	**19**	**49**	**51**

ಸರ್ವಜ್ಞನಗರ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ ಅನುದಾನಿತ ಅನುದಾನರಹಿತವಾದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ/ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳ ವಿವರ.

	ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕರು	ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರು	ಪ್ರೌಢಶಾಲೆ ಶಿಕ್ಷಕರು
ಸರ್ಕಾರಿ	24	91	—
ಅನುದಾನಿತ	09	84	73

ಅನುದಾನ ರಹಿತ	81	64	452
ಒಟ್ಟು	**114**	**239**	**525**

ಸರ್ವಜ್ಞನಗರ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಅನುದಾನಿತ/ ಅನುದಾನರಹಿತವಾದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ/ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಹುದ್ದೆಗಳ ವಿವರ.

	ಕಿರಿಯ ಪ್ರಾಥಮಿಕ ಶಾಲೆಯಲ್ಲಿನ ಖಾಲಿ ಹುದ್ದೆಗಳು	ಹಿರಿಯ ಪ್ರಾಥಮಿಕ ಶಾಲೆಯಲ್ಲಿನ ಖಾಲಿ ಹುದ್ದೆಗಳು	ಪ್ರೌಢಶಾಲೆಯಲ್ಲಿನ ಖಾಲಿ ಹುದ್ದೆಗಳು
ಸರ್ಕಾರಿ	01	06	--
ಅನುದಾನಿತ	12	05	00
ಅನುದಾನ ರಹಿತ	00	00	00
ಒಟ್ಟು	**13**	**11**	**00**

ಆ) ಹೌದು.

ಇ) ಸರ್ವಜ್ಞನಗರ ವ್ಯಾಪ್ತಿಯ ಮತಕ್ಷೇತ್ರದಲ್ಲಿ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಬಾಣಸವಾಡಿ ಹಾಗೂ ಉನ್ನತೀಕರಿಸಿದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ, ಕೆ.ಜಿ.ಹಳ್ಳಿ, ಇಲ್ಲಿ ಆರ್.ಎಂ.ಎಸ್.ಎ. ಯೋಜನೆಯಡಿಯಲ್ಲಿ ಪ್ರೌಢಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಪದವಿ ಕಾಲೇಜು ವಿದ್ಯಾರ್ಥಿ ಮತ್ತು ಬೋಧಕ ವರ್ಗ ವಿವರ.

750 (914) ಶ್ರೀ ಹ್ಯಾರೀಸ್ ಎನ್.ಎ (ಶಾಂತಿನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳು ಮತ್ತು ಅವುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯಾ ವಿವರಗಳು ಮತ್ತು ಬೋಧಕ ಸಿಬ್ಬಂದಿ ವರ್ಗಗಳ ವಿವರ ನೀಡುವುದು;